**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/244/ಪ್ರಾಆಅಉನೇಅ/2016-17/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 05.04.2017.

## ***ಸುತ್ತೋಲೆ***

ವಿಷಯ: 2016-17ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಳ್ಳುವ ಬಗ್ಗೆ.

******

ಕೆಲವೊಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಹಾಗೂ ಪ್ರಾದೇಶಿಕ ಜಂಟಿ ನಿರ್ದೇಶಕರು, ಕೇಂದ್ರ ಕಛೇರಿಗೆ ಅತಿಥಿ ಉಪನ್ಯಾಸಕರ ನೇಮಕಾತಿ ಅನುಮೋದನೆಗೆ ಪ್ರಸ್ತಾವನೆಗಳನ್ನು ಸಲ್ಲಿಸಿದ್ದು, ಸದರಿ ಪ್ರಸ್ತಾವನೆಗಳಲ್ಲಿ ಪ್ರಮುಖವಾಗಿ ಆನ್‌ಲೈನ್‌ನಲ್ಲಿ ಅರ್ಜಿಸಲ್ಲಿಸಿದ ಅಭ್ಯರ್ಥಿಗಳು ಲಭ್ಯವಿಲ್ಲದೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಂಡಿರುವವರ ಆಯ್ಕೆ ಅನುಮೋದನೆ ಹಾಗೂ 2015-16 ಮತ್ತು 2016-17ನೇ ಸಾಲಿನ ಆನ್‌ಲೈನ್‌ನಲ್ಲಿ ಅರ್ಜಿಸಲ್ಲಿಸುವಾಗ ಇಲಾಖೆಯ ವೆಬ್‌ಸೈಟ್‌ನಲ್ಲಿ ತಾಂತ್ರಿಕ ದೋಷದಿಂದ ಅತಿಥಿ ಉಪನ್ಯಾಸಕರ ಹೆಸರು ಕಾಲೇಜಿನ ಪಟ್ಟಿಯಲ್ಲಿ ಬಿಟ್ಟು ಹೋಗಿದ್ದು, ಅವರುಗಳ ವಿವರಗಳನ್ನು ಕಾಲೇಜಿನ ಲಾಗಿನ್‌ನಲ್ಲಿ ದೊರೆಯುವಂತೆ ಮಾಡಿ ಅವರುಗಳಿಗೆ ಗೌರವಧನ ಒದಗಿಸಲು ಇಲಾಖೆಯ ವೆಬ್‌ಸೈಟ್‌ನಲ್ಲಿ ಅವರುಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಅವಕಾಶ ಕಲ್ಪಿಸುವಂತೆ ಕೋರಿರುವುದು ಸರಿಯಷ್ಟೇ.

ಸರ್ಕಾರದ ಪತ್ರ ಸಂಖ್ಯೆ:ಇಡಿ/134/ಡಿಸಿಇ/2016, ದಿನಾಂಕ:18.06.2016ರ ಸರ್ಕಾರದ ಪತ್ರದನ್ವಯ ಈ ಕಛೇರಿ ದಿನಾಂಕ:28.06.2016ರ ಸುತ್ತೋಲೆಯಲ್ಲಿ ಹಾಗೂ ದಿನಾಂಕ:30.06.2016ರ ಪತ್ರದಲ್ಲಿ 2016-17ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಳ್ಳುವ ಬಗ್ಗೆ ಸ್ಪಷ್ಟವಾದ ಮಾರ್ಗದರ್ಶನ/ನಿರ್ದೇಶನ ನೀಡಲಾಗಿದೆ. ಹಾಗೂ ಈಗಾಗಲೇ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ 2016-17ನೇ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಆಯ್ಕೆ ಮಾಡಿಕೊಂಡು ಆನ್‌ಲೈನ್‌ನಲ್ಲಿ ಪ್ರಕಟಿಸಲಾಗಿದೆ ಆದಾಗ್ಯೂ ದಿನಾಂಕ:28.06.2016ರ ಸುತ್ತೋಲೆಯನ್ವಯ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳದೆ ಇತರೆ ಕಾರಣಗಳನ್ನು ನೀಡಿ ಪ್ರಾಂಶುಪಾಲರುಗಳ ತಮ್ಮ ಹಂತದಲ್ಲೇ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು, ಅವರನ್ನು ಅನುಮೋದಿಸುವಂತೆ ಕೋರಿರುವುದು ಕಂಡು ಬಂದಿರುತ್ತದೆ. ಇಂತಹ ನೇಮಕಾತಿಗಳಾಗಿದ್ದಲ್ಲಿ, ಅತಿಥಿ ಉಪನ್ಯಾಸಕರಿಗೆ ನೀಡುವ ಗೌರವಧನವನ್ನು ಸಂಬಂಧಪಟ್ಟ ಪ್ರಾಂಶುಪಾಲರ ವೇತನದಿಂದ ವಸೂಲಾತಿ ಮಾಡಲಾಗುವುದು ಹಾಗೂ ಮುಂದೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಲು ಈ ಮೂಲಕ ಎಲ್ಲಾ ಪ್ರಾಂಶುಪಾಲರಿಗೆ ತಿಳಿಸಲಾಗಿದೆ.

**(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.)**

Sd/-

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

***ಇವರಿಗೆ,***

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಕಲಬುರಗಿ ಮತ್ತು ಧಾರವಾಡ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರುಗಳಿಗೆ.